ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	35
ಸದಸ್ಯರ ಹೆಸರು	ಶ್ರೀ. ಎನ್ ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	21.09.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳಿಗೆ ಅಡುಗೆಯವರು, ಅಡುಗೆ ಸಹಾಯಕರು ಮತ್ತು ರಾತ್ರಿ ಕಾವಲುಗಾರರ ಸಿಬ್ಬಂದಿಗಳ ಸೇವೆಯನ್ನು ಒದಗಿಸಲು ಹೊರ ಸಂಪನ್ಮೂಲ ಏಜೆನ್ಸಿಯವರಿಗೆ ಟೆಂಡರ್ ನಿಬಂಧನೆಗಳಿಗೊಳಪಟ್ಟು ಕಾರ್ಯಾದೇಶವನ್ನು ನೀಡಿರುವುದು ನಿಜವಲ್ಲವೇ:	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಅಡುಗೆಯವರು, ಅಡುಗೆ ಸಹಾಯಕರು ಹಾಗೂ ರಾತ್ರಿ ಕಾವಲುಗಾರರ ಸೇವೆಯನ್ನು ಪಡೆಯಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಟೆಂಡರ್ ನ್ನು ಕರೆದು ಹೊರಸಂಪನ್ಮೂಲ ಏಜೆನ್ಸಿಯನ್ನು ನಿಗಧಿಪಡಿಸಿ ಕಾರ್ಯಾದೇಶವನ್ನು ಜಿಲ್ಲಾ ಮಟ್ಟದಲ್ಲಿ ನೀಡಲಾಗುತ್ತದೆ.
ಆ	ಕಾರ್ಯಾದೇಶದಲ್ಲಿನ ಷರತ್ತಿನನ್ವಯ ಮುಂಗಡವಾಗಿ ಕನಿಷ್ಠ 2 ಮಾಹೆಗಳಿಗೆ ಕನಿಷ್ಠ ವೇತನ ಕಾಯ್ದೆಯನ್ವಯ ಸಂದಾಯವಾಗಬೇಕಾದ ವೇತನವನ್ನು ಸಂಬಂಧಿಸಿದ ಸಿಬ್ಬಂದಿಗಳ ಬ್ಯಾಂಕ್ ಖಾತೆಗೆ ಇ.ಸಿ.ಎಸ್ ಅಥವಾ ಆರ್.ಟಿ.ಜಿ.ಎಸ್ ಮೂಲಕ ಪ್ರತಿ ತಿಂಗಳು 5ನೇ ದಿನಾಂಕದೊಳಗೆ ವೇತನ ಪಾವತಿಸಬೇಕಾಗಿರುವುದು ನಿಜವಲ್ಲವೇ:	ಹೊರಸಂಪನ್ಮೂಲ ಏಜೆನ್ಸಿಯನ್ನು ನಿಗಧಿಪಡಿಸಿ ಷರತ್ತುಗಳನ್ನು ವಿಧಿಸಿ ಕಾರ್ಯಾದೇಶವನ್ನು ಜಿಲ್ಲಾ ಮಟ್ಟದಲ್ಲಿ ನೀಡಲಾಗುತ್ತದೆ. ಸದರಿ ಆದೇಶದಲ್ಲಿ ಕನಿಷ್ಠ 2 ಮಾಹೆಗಳಿಗೆ ವೇತನವನ್ನು ಪ್ರತಿ ತಿಂಗಳು 5 ನೇ ತಾರೀಖಿನೊಳಗೆ ಪಾವತಿಸುವ ಷರತ್ತನ್ನು ವಿಧಿಸಲಾಗಿರುತ್ತದೆ.
ಇ	ಸರ್ಕಾರದಿಂದ ನಿಗದಿತ ಅನುದಾನ ಬಿಡುಗಡೆಯಾಗದಿರುವುದರಿಂದ 6 ತಿಂಗಳಾದರೂ ಸದರಿ ಸಿಬ್ಬಂದಿಗಳಿಗೆ ವೇತನ ಪಾವತಿಸದೆ ಸದರಿ ಏಜೆನ್ಸಿಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಜೀವನ ನಿರ್ವಹಣೆಗೆ ತುಂಬಾ ತೊಂದರೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಈ	ಹಾಗಿದ್ದಲ್ಲಿ, ಸಿಬ್ಬಂದಿಗೆ ಕೂಡಲೇ ವೇತನವನ್ನು ಪಾವತಿಸುವ ಸಂಬಂಧ ಸರ್ಕಾರ ಹಣ ಬಿಡುಗಡೆಗೊಳಿಸಲು ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು).	2019-20 ನೇ ಸಾಲಿನಲ್ಲಿ ಬಾಕಿ ಇದ್ದ ಹೊರಸಂಪನ್ಮೂಲ ಸಿಬ್ಬಂದಿಗಳ ವೇತನ ಪಾವತಿಗಾಗಿ ದಿ: 13.03.2020 ರಲ್ಲಿ ಸರ್ಕಾರವು ರೂ.1910.28 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. 2020-21 ನೇ ಸಾಲಿಗೆ ಸಂಬಂಧಿಸಿದಂತೆ, ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 16 ಟಿಎಆರ್ 2020, ದಿ: 10.6.2020 ರಲ್ಲಿ

		ಹೊರಸಂಪನ್ಮೂಲ ಸಿಬ್ಬಂದಿಗಳಿಗೆ ದಿ: 18.5.2020 ರವರೆಗೆ ವೇತನ ಪಾವತಿಸಲು ಆದೇಶಿಸಲಾಗಿದ್ದು, ನಂತರದ ಅವಧಿಗೆ ವೇತನ ಪಾವತಿಸುವ ಬಗ್ಗೆ ಪ್ರಸ್ತಾವನೆ ಪರಿಶೀಲನೆಯಲ್ಲಿದೆ

ಹಿಂವಕ 232 ಬಿಇಟಿ 2020

(ಬಿ. ಶ್ರೀರಾಮುಲು)
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.